ಕರ್ನಾಟಕ ಸರ್ಕಾರ
(ಕಂದಾಯ ಇಲಾಖೆ)

# ಜಿಲ್ಲಾಧಿಕಾರಿಗಳ ಕಾರ್ಯಾಲಯ, ಮಂಡ್ಯ ಜಿಲ್ಲೆ, ಮಂಡ್ಯ.

ಕರ್ನಾಟಕ ಸರ್ಕಾರ
(ಕಂದಾಯ ಇಲಾಖೆ)

ಸಂಖ್ಯೆ: ಸಿಬ್ಬಂದಿ (1) 91/2019–20 ದಿನಾಂಕ: 12–03–2020.

## –:ಅಧಿಸೂಚನೆ:–

**ವಿಷಯ:–** 2019–20 ನೇ ಸಾಲಿನಲ್ಲಿ ಮಂಡ್ಯ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಬಗ್ಗೆ.

**ಉಲ್ಲೇಖ:–** ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 08 ಸೆಹಿಮ 95, ದಿನಾಂಕ: 20.06.1995.

2. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 97 ಸೆನೆನಿ 2002 ದಿನಾಂಕ: 22.11.2002.
3. ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ 53 ಸೆನೆನಿ 2007, ದಿನಾಂಕ:04.1.2008
4. ಸರ್ಕಾರದ ಅಧಿಸೂಚನೆ ಸಂಖ್ಯೆ: ಕಂಇ 299 ಬಿಎಸ್‌ಸಿ 2006, ದಿನಾಂಕ: 03.02.2019 ಹಾಗೂ 24.07.2009.
5. ಸರ್ಕಾರದ ಅಧಿಸೂಚನೆ ಸಂಖ್ಯೆ: ಕಂಇ 04 ಬಿಎಸ್‌ಸಿ 2011, ದಿನಾಂಕ: 25–02–2011.
6. ಸರ್ಕಾರಿ ಅಧಿಸೂಚನೆ ಸಂಖ್ಯೆ:: ಕಂಇ 100 ಬಿಎಸ್‌ಸಿ 2011, ದಿನಾಂಕ: 29.06.2012 ಹಾಗೂ ನಂತರದ ಸರ್ಕಾರಿ ಆದೇಶಗಳು.

***************

ಮಂಡ್ಯ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಸಂಬಂಧದಲ್ಲಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಮಂಡ್ಯ ಜಿಲ್ಲಾ ಕಂದಾಯ ಘಟಕದಲ್ಲಿ ಖಾಲಿ ಇರುವ ಗ್ರಾಮಲೆಕ್ಕಿಗರ ಹುದ್ದೆಯ ಮೀಸಲಾತಿ ವರ್ಗೀಕರಣ ತ:ಖ್ತೆ:**

| ಕ್ರ.ಸಂ | ಹುದ್ದೆಯ ಹೆಸರು | ಒಟ್ಟು ಹುದ್ದೆ | ವಿದ್ಯಾರ್ಹತೆ | ವೇತನ ಶ್ರೇಣಿ |
|---|---|---|---|---|
| 01 | ಗ್ರಾಮಲೆಕ್ಕಿಗರು | 54 | ದ್ವಿತೀಯ ಪಿ.ಯು.ಸಿ ಅಥವಾ 12 ನೇ ತರಗತಿ (12ನೇ Standrad Examination conducted by CBSE or ICSE) ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಮತ್ತು ಗಣಕಯಂತ್ರ ಪರೀಕ್ಷಾ ಪ್ರಮಾಣ ಪತ್ರ ಹೊಂದಿರತಕ್ಕದ್ದು. | 21400–42000 |

–2–

## ವರ್ಗೀಕರಣ ತಃಖ್ತೆ:-

| ಕ್ರ.ಸಂ | ಹುದ್ದೆಯ ಹೆಸರು | ಒಟ್ಟು | ವರ್ಗೀಕರಣ | | | | | | | | |
|---|---|---|---|---|---|---|---|---|---|---|---|
| | | | | ಇತರೆ | ಮಹಿಳೆ | ಗ್ರಾಮೀಣ | ಅಂ.ವಿ | ಮಾ.ಸೈ | ಕ.ಮಾ.ಅ | ಯೋ.ನಿ.ರಾ | ಒಟ್ಟು |
| 01 | ಗ್ರಾಮ ಲೆಕ್ಕಿಗ | 54 | ಪ.ಜಾ | 01 | 02 | 02 | – | 01 | 01 | 01 | 08 |
| | | | ಪ.ಪಂ | – | 01 | 01 | – | – | – | – | 02 |
| | | | ಪ್ರ-1 | – | 01 | – | – | – | 01 | – | 02 |
| | | | ಪ್ರ-2ಎ | 01 | 02 | 02 | – | 01 | 01 | 01 | 08 |
| | | | ಪ್ರ-2ಬಿ | – | 01 | – | – | – | 01 | – | 02 |
| | | | ಪ್ರ-3ಎ | – | 01 | – | – | – | 01 | – | 02 |
| | | | ಪ್ರ-3ಬಿ | – | 01 | 01 | – | – | – | 01 | 03 |
| | | | ಸಾಮಾನ್ಯ ಅಭ್ಯರ್ಥಿ | 06 | 08 | 07 | 02 | 02 | 01 | 01 | 27 |
| | | | ಒಟ್ಟು | 08 | 17 | 13 | 02 | 04 | 06 | 04 | 54 |

- ಅಂ.ವಿ.- ಅಂಗವಿಕಲರು (ಅಂಗವಿಕಲರ ಮೀಸಲಾತಿಯಡಿ ರೋಸ್ಟರ್ ಬಿಂದುವಿನ ಅನುಸಾರ ಕುಷ್ಠರೋಗದಿಂದ ಗುಣಮುಖರಾದವರು, ಮಾನಸಿಕ ಅಸ್ವಸ್ಥರು, ಚಲನ-ವಲನ ವೈಕಲ್ಯ ಹೊಂದಿರುವವರು ಹಾಗೂ ಶ್ರವಣದೋಷ ಅಭ್ಯರ್ಥಿಗಳನ್ನು ಮಾತ್ರ ಪರಿಗಣಿಸಲಾಗುತ್ತದೆ.)
- ಮಾ.ಸೈ- ಮಾಜಿ ಸೈನಿಕ
- ಕ.ಮಾ.ಅ- ಕನ್ನಡ ಮಾದ್ಯಮ ಅಭ್ಯರ್ಥಿ
- ಯೋ.ನಿ.ರಾ- ಯೋಜನಾ ನಿರಾಶ್ರಿತರು
  1. ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ: 18-03-2020.
  2. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 18-04-2020.

3. ಅರ್ಜಿ ಸಲ್ಲಿಸಲು ನಿಯಮಗಳು:-

ಅರ್ಹ ಅಭ್ಯರ್ಥಿಗಳು ಆನ್ ಲೈನ್ (online) ಮೂಲಕ ಮಾತ್ರ ಅರ್ಜಿ ಸಲ್ಲಿಸತಕ್ಕದ್ದು, ಕಂಪ್ಯೂಟರ್ ನಲ್ಲಿ http://mandya-va.kar.nic.in ಈ ವೆಬ್ ವಿಳಾಸದಲ್ಲಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಅರ್ಹ ಅಭ್ಯರ್ಥಿಗಳು ದಿನಾಂಕ: 18-03-2020 ರಿಂದ ಈ ವೆಬ್ ವಿಳಾಸದಲ್ಲಿ ಅರ್ಜಿ ಸಲ್ಲಿಸಲು ಲಭ್ಯವಿರುತ್ತದೆ. ಹಾಗೂ ಕೊನೆಯ ದಿನಾಂಕ: 18-04-2020 ರ ಸಂಜೆ 5.30 ಆಗಿದ್ದು, ಸದರಿ ಅವಧಿಯೊಳಗೆ ಅರ್ಜಿಯನ್ನು ಸಲ್ಲಿಸಬಹುದಾಗಿರುತ್ತದೆ.

ಅಭ್ಯರ್ಥಿಯು ಅರ್ಜಿಯನ್ನು ಭರ್ತಿ ಮಾಡಿದ ತರುವಾಯ ಚಲನ್ನಿನ ಮುದ್ರಿತ ಪ್ರತಿಯನ್ನು ಪಡೆದು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಯಾವುದಾದರೂ ಶಾಖೆಯಲ್ಲಿ ಪಾವತಿಸಿ ಸ್ವೀಕೃತಿ ಪಡೆಯಬೇಕು. ಅಭ್ಯರ್ಥಿಯು ಶುಲ್ಕ ಪಾವತಿಸದ ನಂತರವೇ ಅರ್ಜಿಯು ಸ್ವೀಕೃತವಾಗುತ್ತದೆ.

ಸೂಚನೆ:- ಆನ್‌ಲೈನ್ ಹೊರತುಪಡಿಸಿ, ಮುದ್ದಾಂ, ಅಂಚೆ, ಕೊರಿಯರ್, ಇನ್ನಿತರೆ ಯಾವುದೇ ಮೂಲದಿಂದ ಬರುವ ಅರ್ಜಿ ಗಳನ್ನು ಪರಿಗಣಿಸಲಾಗುವುದಿಲ್ಲ.

4. ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಶುಲ್ಕದ ವಿವರ ಈ ಕೆಳಕಂಡಂತೆ ಇರುತ್ತದೆ.

| ಕ್ರ.ಸಂಖ್ಯೆ | ಮೀಸಲಾತಿ ವರ್ಗ | ಶುಲ್ಕ | ಹಣ ಪಾವತಿಸಬೇಕಿರುವ ಕಛೇರಿ ವಿವರ |
|---|---|---|---|
| 1. | ಪ್ರವರ್ಗ 2ಎ, ಪ್ರವರ್ಗ 2ಬಿ, ಪ್ರವರ್ಗ 3ಎ, ಪ್ರವರ್ಗ 3ಬಿ ಮತ್ತು ಸಾಮಾನ್ಯ ವರ್ಗ. | ರೂ. 200/– | ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ (ಬ್ಯಾಂಕ್ ಶುಲ್ಕವನ್ನು ಅಭ್ಯರ್ಥಿಗಳು ಪ್ರತ್ಯೇಕವಾಗಿ ಭರಿಸತಕ್ಕದ್ದು.) |
| 2. | ಪರಿಶಿಷ್ಟಜಾತಿ/ಪರಿಶಿಷ್ಠ ಪಂಗಡ/ಪ್ರವರ್ಗ–1 ಮತ್ತು ಅಂಗವಿಕಲ ಅಭ್ಯರ್ಥಿ. | ರೂ. 100/– | |

- **ಶುಲ್ಕ ಪಾವತಿಸಲು ಕೊನೆಯ ದಿನಾಂಕ: 22–04–2020.**

5. **ಹುದ್ದೆಗೆ ನಿಗಧಿಪಡಿಸಿರುವ ವಿದ್ಯಾರ್ಹತೆ:** ಕರ್ನಾಟಕ ರಾಜ್ಯದ ಪದವಿ ಪೂರ್ವ ಶಿಕ್ಷಣ ಇಲಾಖೆ ನಡೆಸುವ ದ್ವಿತೀಯ ಪಿ.ಯು.ಸಿ ಯಲ್ಲಿ ಉತ್ತೀರ್ಣರಾಗಿತಕ್ಕದ್ದು ಅಥವಾ ಸಿ.ಬಿ.ಎಸ್.ಇ ಅಥವಾ ಐ.ಸಿ.ಎಸ್.ಇ ರವರು ನಡೆಸುವ 12ನೇ ತಗರತಿಯಲ್ಲಿ ಉತ್ತೀರ್ಣರಾಗಿರತಕ್ಕದ್ದು, ಅಭ್ಯರ್ಥಿಗಳು ಮೇಲೆ ಹೇಳಿರುವ ವಿದ್ಯಾರ್ಹತೆಯನ್ನು ಈ ಅಧಿಸೂಚನೆ ಹೊರಡಿಸಿದ ದಿನಾಂಕಕ್ಕೆ ಮುಂಚಿತವಾಗಿ ಹೊಂದಿರತಕ್ಕದ್ದು.

   **ಸೂಚನೆ:**– ಮುಕ್ತ ವಿಶ್ವ ವಿದ್ಯಾಲಯವು ನಡೆಸುವ 10+2, ಜೆ.ಓ.ಸಿ ಹಾಗೂ ಇನ್ನಿತರೆ ವಿದ್ಯಾರ್ಹತೆಯನ್ನು ನೇಮಕಾತಿಗೆ ಪರಿಗಣಿಸಲಾಗುವುದಿಲ್ಲ.

6. **ಹುದ್ದೆಗೆ ನಿಗದಿಪಡಿಸಿರುವ ವೇತನ ಶ್ರೇಣಿ:– ರೂ. 21400–500–22400–550–24600–600–27000–650–29600–750–32600–850–36000–950–39800–1100–42000.**
7. **ಪಿಂಚಣಿ ಸೌಲಭ್ಯ:** ಸಿವಿಲ್ ಸೇವೆಯಡಿ ಗ್ರಾಮಲೆಕ್ಕಿಗರ ಹುದ್ದೆಗಳಿಗೆ ಸರ್ಕಾರದ ಆದೇಶ ಸಂಖ್ಯೆ: ಎಫ್ ಡಿ(ಎಸ್.ಪಿ.ಎಲ್) 04 ಪಿಇಟಿ 2005, ದಿನಾಂಕ:31/03/2006ರಂತೆ ನೂತನ ಪಿಂಚಣಿ (ಎನ್.ಪಿ.ಎಸ್) ವ್ಯಾಪ್ತಿಗೆ ಒಳಪಡುತ್ತಾರೆ
8. ಅಭ್ಯರ್ಥಿಯು ಜನ್ಮ ದಿನಾಂಕಕ್ಕೆ ಎಸ್.ಎಸ್.ಎಲ್.ಸಿ ಅಂಕಪಟ್ಟಿಯನ್ನು ಸಲ್ಲಿಸತಕ್ಕದ್ದು.
9. **ವಯೋಮಿತಿ:**– ಅಭ್ಯರ್ಥಿಯು ಅರ್ಜಿ ಸಲ್ಲಿಸುವ ದಿನಾಂಕಕ್ಕೆ ಕೆಳಕಂಡಂತೆ ವಯೋಮಿತಿ ಹೊಂದಿರಬೇಕು.

   **ಅ) ಕನಿಷ್ಠ 18 ವರ್ಷಗಳ ವಯಸ್ಸನ್ನು ಪೂರೈಸಿರತಕ್ಕದ್ದು**

   **ಆ) ಗರಿಷ್ಠ ವಯೋಮಿತಿ:**

   *** ಸಾಮಾನ್ಯ ವರ್ಗ– 35 ವರ್ಷ**

   *** 2ಎ,2ಬಿ,3ಎ 3ಬಿ– 38 ವರ್ಷ**

   *** ಪ.ಜಾ./ಪ.ಪಂ.ಪ್ರವರ್ಗ–1– 40 ವರ್ಷ**

–4–

9. <u>**ಈ ಕೆಳಗಿನ ಸಂದರ್ಭದಲ್ಲಿ ನೇಮಕಾತಿ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು.**</u>

1. ಮಾಜಿ ಸೈನಿಕನಾಗಿದ್ದಲ್ಲಿ ಅವನು/ಅವಳು ಕೇಂದ್ರ ಸಶಸ್ತ್ರದಳದಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರೋ ವರ್ಷಗಳಿಗೆ 3 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳನ್ನು ಪರಿಗಣಿಸುವುದು.
2. ಅಭ್ಯರ್ಥಿಯು ಅಂಗವಿಕಲನಾಗಿದ್ದರೆ –10 ವರ್ಷಗಳು
3. ಅಭ್ಯರ್ಥಿಯು ವಿಧವೆಯಾಗಿದ್ದಲ್ಲಿ–10 ವರ್ಷಗಳು

**ವಿವರಣೆ:–** ಕೇಂದ್ರ ಸಶಸ್ತ್ರದಳಗಳಲ್ಲಿ ಸೇವೆ ಸಲ್ಲಿಸುವಾಗ ಹತರಾದ ಅಥವಾ ಶಾಶ್ವತವಾಗಿ ದೈಹಿಕ ವಿಕಲತೆ ಹೊಂದಿದ ಮಾಜಿ ಸೈನಿಕ ಕುಟುಂಬದವರು (ಗಂಡ/ಹೆಂಡತಿ ಮತ್ತು ಮಕ್ಕಳು) ಮಾಜಿ ಸೈನಿಕ ಮೀಸಲಾತಿಗೆ ಅರ್ಹರಿರುತ್ತಾರೆ. ಆದರೆ ಅಂತಹ ಅಭ್ಯರ್ಥಿಗಳಿಗೆ ವಯೋಮಿತಿಯಲ್ಲಿ ಸಡಿಲಿಕೆ ಇರುವುದಿಲ್ಲ. ಈ ಬಗ್ಗೆ ಸಕ್ಷಮ ಮಿಲಿಟರಿ ಅಧಿಕಾರಿಗಳಿಂದ ಪ್ರಮಾಣ ಪತ್ರ ಪಡೆದಿರತಕ್ಕದ್ದು

10. <u>**ಮೀಸಲಾತಿ ಹಾಗೂ ವಯೋಮಿತಿ ರಿಯಾಯಿತಿ ಕೋರಿದ್ದಲ್ಲಿ ಹಾಜರುಪಡಿಸಬೇಕಿರುವ ಪ್ರಮಾಣ ಪತ್ರಗಳು**</u>

    1. ಪರಿಶಿಷ್ಟ ಜಾತಿ, ಪರಿಶಿಷ್ಠ ಪಂಗಡ, ಪ್ರವರ್ಗ–1, 2ಎ, 2ಬಿ, 3ಎ, 3ಬಿ ಮೀಸಲಾತಿ ಅಭ್ಯರ್ಥಿಗಳು ನಮೂನೆ ಡಿ ,ಇ, ಎಫ್ ನಲ್ಲಿ ತಹಸೀಲ್ದಾರ್ ರವರಿಂದ ಪ್ರಮಾಣ ಪತ್ರ ಪಡೆದಿರತಕ್ಕದ್ದು,
    2. ಸೇವೆಯಲ್ಲಿರುವ ಅಭ್ಯರ್ಥಿಗಳು, ಸದರಿ ಹುದ್ದೆಗೆ ಅರ್ಜಿ ಸಲ್ಲಿಸುವಾಗ ಸಂಬಂಧಪಟ್ಟ ನೇಮಕಾತಿ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದಿರತಕ್ಕದ್ದು,
    3. ಗ್ರಾಮೀಣ ಮೀಸಲಾತಿಯಡಿ ಮೀಸಲಾತಿ ಕೋರುವ ಅಭ್ಯರ್ಥಿಗಳು 1 ರಿಂದ 10 ನೇ ತರಗತಿ ಯವರೆಗೆ ಗ್ರಾಮೀಣ ಪ್ರದೇಶದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ನಮೂನೆ 1–2 ರಲ್ಲಿ ಪ್ರಮಾಣ ಪತ್ರ ಪಡೆದಿರತಕ್ಕದ್ದು,
    4. ಕನ್ನಡ ಮಾದ್ಯಮದಲ್ಲಿ ಮೀಸಲಾತಿ ಕೋರುವ ಅಭ್ಯರ್ಥಿಗಳು ನಮೂನೆ–1–2 ರಲ್ಲಿ 1 ರಿಂದ 10 ನೇ ತರಗತಿ ಯವರಿಗೆ ಕನ್ನಡ ಮಾದ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಪ್ರಮಾಣ ಪತ್ರ ಪಡೆದಿರತಕ್ಕದ್ದು.
    5. ಅಂಗವಿಕಲ ಮೀಸಲಾತಿಯಡಿ ಮೀಸಲಾತಿ ಕೋರುವ ಅಭ್ಯರ್ಥಿಗಳು ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 115 ನೇಸನಿ 200 ದಿನಾಂಕ:19.11.2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆಯ ಬಗ್ಗೆ ಸಂಬಂಧಪಟ್ಟ ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯು ನೀಡುವ ಪ್ರಮಾಣ ಪತ್ರವನ್ನು ಹೊಂಡಿರತಕ್ಕದ್ದು,
    6. ಯೋಜನಾ ನಿರಾಶ್ರಿತರ ಮೀಸಲಾತಿಯಡಿ ಮೀಸಲಾತಿ ಕೋರುವ ಅಭ್ಯರ್ಥಿಗಳು, ತಹಸೀಲ್ದಾರ್ ರವರಿಂದ ಪ್ರಮಾಣ ಪತ್ರವನ್ನು ಪಡೆದಿರತಕ್ಕದ್ದು,
    7. ಮಾಜಿ ಸೈನಿಕ ಮೀಸಲಾತಿಯಡಿ ಮೀಸಲಾತಿ ಕೋರುವ ಅಭ್ಯರ್ಥಿಗಳು, ಸೇವೆಯಿಂದ ಮುಕ್ತಿ ಹೊಂದಿದ ಬಗ್ಗೆ ಪ್ರಮಾಣ ಪತ್ರ ಪಡೆದಿರತಕ್ಕದ್ದು

ಅಭ್ಯರ್ಥಿಗಳು ಮೇಲಿನ ಪ್ರಮಾಣ ಪತ್ರಗಳನ್ನು, ಈ ಅಧಿಸೂಚನೆಯಲ್ಲಿ ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದೊಳಗೆ ಪಡೆದಿರತಕ್ಕದ್ದು,

11. **ಅರ್ಹತಾ ಷರತ್ತುಗಳು ಹಾಗೂ ಸೂಚನೆಗಳು :-**

1. ಅಭ್ಯರ್ಥಿಯು ಭಾರತೀಯ ನಾಗರೀಕನಾಗಿರತಕ್ಕದ್ದು,
2. ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಆರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯ ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನು ಉಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನ್ಯತೆಯಿಂದ ಮುಕ್ತರಾಗಿರಬೇಕು.
3. ಅರ್ಜಿಯಲ್ಲಿ ತಪ್ಪು/ಸುಳ್ಳು ಮಾಹಿತಿ ನೀಡಿ ಉದ್ಯೋಗ ಪಡೆಯುವ ಪ್ರಯತ್ನ ಮಾಡಿರುವುದು ಪ್ರಾಧಿಕಾರದ ಗಮನಕ್ಕೆ ಬಂದ ತಕ್ಷಣ ಅಂತಹ ಅಭ್ಯರ್ಥಿಗಳ ವಿರುದ್ಧ ಕ್ರಿಮಿನಲ್ ಮೊಕದ್ದಮೆಯನ್ನು ದಾಖಲಿಸಲಾಗುವುದು.
4. ಅಭ್ಯರ್ಥಿಗಳು ಹುದ್ದೆಗೆ ನಿಗದಿಪಡಿಸಿರುವ ವಿದ್ಯಾರ್ಹತೆಯನ್ನು ಅಧಿಸೂಚನೆ ಹೊರಡಿಸುವ ದಿನಾಂಕಕ್ಕೆ ಮುಂಚಿತವಾಗಿ ಹೊಂದಿರಬೇಕು.
5. ಅಭ್ಯರ್ಥಿಯು ಗಣಕಯಂತ್ರ ಬಳಕೆ ಮಾಡುವ ಜ್ಞಾನ ಹಾಗೂ ಬೇಸಿಕ್ ಜ್ಞಾನ ಹೊಂದಿರಬೇಕು
6. ನಿಗದಿತ ದಿನಾಂಕದ ನಂತರ ಹಾಕಿದ ಅರ್ಜಿಯನ್ನು ಪರಿಗಣಿಸಲಾಗುವುದಿಲ್ಲ.
7. ನಿಗಡಿಪಡಿಸಿರುವ ವಿದ್ಯಾರ್ಹತೆಯಲ್ಲಿ ಪಡೆದಿರುವ ಅಂಕಗಳ ಮೆರಿಟ್ ಆಧಾರದಲ್ಲಿ ಮಿಸಲಾತಿಯನ್ವಯ ಪರಿಶೀಲನಾ ಪಟ್ಟಿಯನ್ನು ಅಂತರ್ಜಾಲದಲ್ಲಿ ಪ್ರಕಟಿಸಲಾಗುವುದು, ಪರಿಶೀಲನಾ ದಿನಾಂಕದಂದು ಅಭ್ಯರ್ಥಿಗಳು ಮೂಲ ದಾಖಲೆಗಳನ್ನು ಹಾಜರುಪಡಿಸತಕ್ಕದ್ದು,
8. ಜಾತಿ ಅಡಿಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳು, ಜಾತಿ ಬಗ್ಗೆ ಜಿಲ್ಲಾಧಿಕಾರಿಗಳು (ಅಧ್ಯಕ್ಷರು ಜಾತಿ ಆದಾಯ ಪರಿಶಿಲನಾ ಸಮಿತಿ) ಸಿಂಧುತ್ವ ಪ್ರಮಾಣ ಪತ್ರ ನೀಡಿದ ನಂತರ ನೇಮಕಾತಿ ಆದೇಶ ಹೊರಡಿಸಲಾಗುವುದು
9. ಅಭ್ಯರ್ಥಿಗಳು ಅರ್ಜಿಯಲ್ಲಿ ನಮೂದಿಸಿರುವಂತೆ ಅರ್ಹತೆ ಹಾಗೂ ಮೀಸಲಾತಿಗೆ ಅನುಗುಣವಾಗಿ ಎಲ್ಲಾ ಮೂಲ ದಾಖಲೆಗಳ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಲಾಗಿರುವ ಕೊನೆಯ ದಿನಾಂಕದ ಒಳಗೆ ಪಡೆದು ಹೊಂದಿರಬೇಕು. ಹಾಗೂ ಇಲಾಖೆಯು ಮೂಲದಾಖಲೆಗಳನ್ನು ಪರಿಶೀಲನೆಗೆ ಅಗತ್ಯಪಡಿಸಿದಾಗ ಹಾಜರುಪಡಿಸತಕ್ಕದ್ದು.
10. ಅಂತಿಮವಾಗಿ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶಗಳನ್ನು ನೀಡುವ ಮುನ್ನ ಯಾವುದೇ ಹಂತದಲ್ಲಿ ಯಾವುದೇ ಕಾರಣ/ಮಾಹಿತಿ ನೀಡದೆ, ಈ ನೇಮಕಾತಿ ಪ್ರಕ್ರಿಯೆಯನ್ನು ಮುಂದೂಡುವ ಅಥವಾ ರದ್ದು ಪಡಿಸುವ ಅಥವಾ ವಿಧಿಸಲಾಗಿರುವ ಷರತ್ತನ್ನು ಸಡಿಲಗೊಳಿಸುವ ಅಥವಾ ಹೆಚ್ಚುವರಿ ಷರತ್ತನ್ನು ವಿಧಿಸುವ, ತುಂಬಲಾಗುವ ಹುದ್ದೆಗಳ ಸಂಖ್ಯೆಯನ್ನು ಬದಲಾಯಿಸುವ/ನಿರ್ಣಯಿಸುವ ಅಧಿಕಾರವನ್ನು ಹಾಗೂ ನೇಮಕಾತಿ ಬಗ್ಗೆ ಅಂತಿಮ ತೀರ್ಮಾನವನ್ನು ನೇಮಕಾತಿ ಪ್ರಾಧಿಕಾರಿಯಾದ ಜಿಲ್ಲಾಧಿಕಾರಿ, ಮಂಡ್ಯರವರು ಕಾಯ್ದಿರಿಸಿಕೊಂಡಿರುತ್ತಾರೆ.
11. ಗ್ರಾಮಲೆಕ್ಕಿಗರ ಹುದ್ದೆಗಳನ್ನು ಹೆಚ್ಚಿಸುವ ಹಾಗೂ ಕಡಿಮೆ ಮಾಡಿಕೊಳ್ಳುವ ಅಧಿಕಾರವು ನೇಮಕಾತಿ ಪ್ರಾಧಿಕಾರಿಯಾದ ಜಿಲ್ಲಾಧಿಕಾರಿ, ಮಂಡ್ಯರವರು ಹೊಂದಿರುತ್ತಾರೆ.

12. **ಸೂಚನೆಗಳು:-**

1. ಅರ್ಜಿ ಸ್ವೀಕರಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕವು ಸಾರ್ವಜನಿಕ ರಜಾ ದಿನವಾಗಿ ಘೋಷಿಸಲ್ಪಟ್ಟರೆ ಅಂತಹ ದಿನಾಂಕದ ಮಾರನೇ ದಿನ ಅರ್ಜಿ ಸ್ವೀಕರಿಸಲು ಕೊನೆಯ ದಿನಾಂಕವಾಗಿರುತ್ತದೆ.

2. ಅಭ್ಯರ್ಥಿಗಳ ನೇಮಕಾತಿಗೆ ಶಿಫಾರಸ್ಸುಗಳನ್ನು ಮಾಡಿದರೆ ಅಂಥವರ ಅರ್ಜಿಗಳನ್ನು ತಿರಸ್ಕರಿಸಲಾಗುವುದು
3. ಅರ್ಜಿದಾರರೊಡನೆ ಪತ್ರ ವ್ಯವಹಾರಕ್ಕೆ ಅವಕಾಶವಿರುವುದಿಲ್ಲ.
4. ಅರ್ಜಿಯಲ್ಲಿ ಸುಳ್ಳು/ತಪ್ಪು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳ ಯಾವುದೇ ಮುನ್ಸೂಚನೆ ನೀಡದೆ ತಿರಸ್ಕರಿಸಲಾಗುವುದು.
5. ಅರ್ಜಿಯಲ್ಲಿ ಕೇಳಿರುವ ಮಾಹಿತಿಯನ್ನು ಅಪೂರ್ಣವಾಗಿ ಭರ್ತಿಯಾಗಿರುವ ಅರ್ಜಿಗಳನ್ನು ಯಾವುದೇ ಮುನ್ಸೂಚನೆ ನೀಡದೆ ತಿರಸ್ಕರಿಸಲಾಗುವುದು.
6. ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು, ಎಲ್ಲಾ ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಲಾಗುವುದು ನಂತರ ಯಾವುದೇ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.
7. ಈ ಅಧಿಸೂಚನೆ ಅನ್ವಯ ನೇಮಕಾತಿ ಹೊಂದುವ ಅಭ್ಯರ್ಥಿಗಳು 2 ವರ್ಷಗಳ ಪರೀಕ್ಷಾವಧಿ ಹಾಗೂ 5 ವರ್ಷಗಳ ಸೇವೆಯನ್ನು ಮಂಡ್ಯ ಜಿಲ್ಲೆಯಲ್ಲಿ ಪೂರೈಸುವುದು ಕಡ್ಡಾಯವಾಗಿರುತ್ತದೆ.
8. ಅಭ್ಯರ್ಥಿಯ ಹೆಸರು ಅಂತಿಮ ಪಟ್ಟಿಯಲ್ಲಿ ಸೇರ್ಪಡೆಯಾಗಿದೆ ಎಂಬುವುದರ ಆಧಾರದ ಮೇಲೆ ಅಭ್ಯರ್ಥಿಗೆ ನೇಮಕಾತಿ ಹಕ್ಕು ದೊರೆಯುವುದಿಲ್ಲ
9. ಅರ್ಹ ಅಭ್ಯರ್ಥಿಗಳು ಅರ್ಜಿಯನ್ನು ಭರ್ತಿ ಮಾಡುವ ಮುನ್ನ ವೆಬ್‌ಸೈಟ್‌ನಲ್ಲಿ ಹೇಳಿರುವ ಸೂಚನೆಗಳನ್ನು ಪಾಲಿಸುವುದು.
10. ಒಬ್ಬ ಅಭ್ಯರ್ಥಿಯು ಒಂದು ಚಲನ್ನಿಗೆ ಕೇವಲ ಒಂದು ಅರ್ಜಿಯನ್ನು ಮಾತ್ರ ಹಾಕತಕ್ಕದ್ದು.
11. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾಧಿಕಾರಿಗಳ ಕಛೇರಿಯಲ್ಲಿ ಈ ಕೆಳಕಂಡಂತೆ ಸಂಪರ್ಕಿಸಿತಕ್ಕದ್ದು.
    ಅ) ದೂರಾವಣಿ ಸಂಖ್ಯೆ: 08232–224600
    ಆ) ಫ್ಯಾಕ್ಸ್ ನಂ.–08232–221417

ಅಧ್ಯಕ್ಷರು,
ಗ್ರಾಮಲೆಕ್ಕಿಗರ ಆಯ್ಕೆ ಮತ್ತು ನೇರನೇಮಕಾತಿ ಪ್ರಾಧಿಕಾರ
ಹಾಗೂ ಜಿಲ್ಲಾಧಿಕಾರಿ, ಮಂಡ್ಯ ಜಿಲ್ಲೆ.

**ಪ್ರತಿಯನ್ನು ಈ ಕೆಳಕಂಡವರಿಗೆ ಮಾಹಿತಿಗಾಗಿ ಹಾಗೂ ಮುಂದಿನ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಸಿಬ್ಬಂದಿ ಮತ್ತು ಆಡಳಿತ ಸುದಾರಣೆ ಇಲಾಖೆ, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
3. ಮಹಾಲೇಖಪಾಲರು, ಬೆಂಗಳೂರುರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
4. ಪ್ರಾದೇಶಿಕ ಆಯುಕ್ತರು, ಮೈಸೂರು ವಿಭಾಗ, ಮೈಸೂರು ರವರಿಗೆ ಅವಗಾಹನೆಗೆ ಸಲ್ಲಿಸಿದೆ.

–7–

5. ಸಂಕಲನಕಾರರು, ಸರಕಾರಿ ಹೊರವಲಯ ಮುದ್ರಣಾಲಯ, ಆರ್.ವಿ.ಕಾಲೇಜ್ ಅಂಚೆ, 8ನೇ ಮೈನ್, ಮೈಸೂರು ರಸ್ತೆ, ಕೆಂಗೇರಿ, ಬೆಂಗಳೂರು-560059, ಕರ್ನಾಟಕ ರಾಜ್ಯ ಪತ್ರ ಬೆಂಗಳೂರು ಇವರಿಗೆ ಕಳುಹಿಸುತ್ತಾ, ಅಧಿಸೂಚನೆಯನ್ನು ವಿಶೇಷ ರಾಜ್ಯಪತ್ರದಲ್ಲಿ ಪ್ರಕಟಿಸಲು ಹಾಗೂ 100 ಪ್ರತಿಗಳನ್ನು ಜಿಲ್ಲಾಧಿಕಾರಿಗಳು, ಮಂಡ್ಯ ಜಿಲ್ಲೆ, ಮಂಡ್ಯ ಇವರಿಗೆ ಒದಗಿಸಲು ಕೋರಿದೆ.
6. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು.
7. ಪ್ರಾಂಶುಪಾಲರು, ಜಿಲ್ಲಾ ತರಬೇತಿ ಸಂಸ್ಥೆ, ಮಂಡ್ಯ
8. ಉಪನಿರ್ದೇಶಕರು, ಜಿಲ್ಲಾ ಸಮಾಜ ಇಲಾಖೆ, ಮಂಡ್ಯ
9. ಜಿಲ್ಲಾ ಅಧಿಕಾರಿ, ಹಿಂದುಳಿದ ವರ್ಗಗಳು ಮತ್ತು ಅಲ್ಪಸಂಖ್ಯಾತರ ಇಲಾಖೆ, ಮಂಡ್ಯ
10. ಉಪ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಮಂಡ್ಯ
11. ಉಪವಿಭಾಗಾಧಿಕಾರಿಗಳು, ಮಂಡ್ಯ/ಪಾಂಡವಪುರ ಉಪವಿಭಾಗ ಇವರಿಗೆ ಕಳುಹಿಸುತ್ತಾ, ನಿಮ್ಮ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
12. ಜಿಲ್ಲೆಯ ಎಲ್ಲಾ ತಹಸೀಲ್ದಾರ್, ರವರಿಗೆ ಕಳುಹಿಸುತ್ತಾ ನಿಮ್ಮ ಕಛೇರಿಯ ಸೂಚನಾ ಫಲಕದಲ್ಲಿ ಪ್ರಕಟಿಸಲು ತಿಳಿಸಿದೆ.
13. ಈ ಕಾರ್ಯಾಲಯದ ಸೂಚನಾ ಫಲಕಕ್ಕೆ
14. ಹೆಚ್ಚುವರಿ ಪ್ರತಿಗಳು ಶಾಖಾ ಕಡತಕ್ಕೆ.

ಅಧ್ಯಕ್ಷರು,
ಗ್ರಾಮಲೆಕ್ಕಿಗರ ಆಯ್ಕೆ ಮತ್ತು ನೇರನೇಮಕಾತಿ ಪ್ರಾಧಿಕಾರ
ಹಾಗೂ ಜಿಲ್ಲಾಧಿಕಾರಿ, ಮಂಡ್ಯ ಜಿಲ್ಲೆ.